ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ : 22ನೇ ಜುಲೈ, 2019

ಪಶುಸಂಗೋಪನೆ ಇಲಾಖೆಯಲ್ಲಿರುವ ಯೋಜನೆಗಳು

ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

453 (592) ಮಾನ್ಯ ಪಶುಸಂಗೋಪನೆ ಮತ್ತು ಮೀನುಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪಶುಸಂಗೋಪನಾ ಇಲಾಖೆಯಲ್ಲಿರುವ ಯೋಜನೆಗಳು ಯಾವುವು; ಸದರಿ ಯೋಜನೆಯಲ್ಲಿ ರಾಜ್ಯದ ಹಾಗೂ ಕೇಂದ್ರದ ಪಾಲುಗಳೆಷ್ಟು; (ಸಂಪೂರ್ಣ ವಿವರ ನೀಡುವುದು)

(ಆ) ಪಶುಸಂಗೋಪನಾ ಇಲಾಖೆಯಲ್ಲಿರುವ ಯೋಜನೆಗಳನ್ನು ಪಡೆದುಕೊಳ್ಳಲು ಇರುವ ನಿಯಮಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) 2016-17ನೇ ಸಾಲಿನಿಂದ ಇಲ್ಲಿಯವರೆಗೆ ಪಶುಸಂಗೋಪನಾ ಇಲಾಖೆಯಿಂದ ಯಾವ ಯಾವ ಯೋಜನೆಯಡಿ ಎಷ್ಟು ಫಲಾನುಭವಿಗಳು ಲಾಭ ಪಡೆದುಕೊಂಡಿರುತ್ತಾರೆ; (ಸಂಪೂರ್ಣ ವಿವರಗಳನ್ನು ಫಲಾನುಭವಿಯ ಹೆಸರು ಸಮೇತ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಪಶುಸಂಗೋಪನಾ ಇಲಾಖೆಯಿಂದ ಇಲ್ಲಿಯವರೆಗೆ ನೀಡಿದಂತಹ ಜಾನುವಾರುಗಳ ಪೈಕಿ ಎಷ್ಟು ಜಾನುವಾರುಗಳು ಮೃತಪಟ್ಟಿರುತ್ತವೆ; ಆರ್ಥಿಕ ವರ್ಷವಾರು ವಿತರಣೆಯಾದ ವಿವರ ಹಾಗೂ ಅದರಲ್ಲಿ ಮೃತವಾದಂತಹ ಜಾನುವಾರುಗಳೆಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು ಹಾಗೂ ವಿತರಿಸಲಾದ ಹಾಗೂ ಮೃತ ಹೊಂದಿದ ಜಾನುವಾರಗಳ ಶೇಕಡವಾರು ಮಾಹಿತಿ ನೀಡುವುದು)